ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ : 22ನೇ ಜುಲೈ, 2019

ಹಿಂದುಳಿದ ವರ್ಗದ ವಿದ್ಯಾರ್ಥಿ /ವಿದ್ಯಾರ್ಥಿನಿಯರ ವೈದ್ಯಕೀಯ

ಹಾಗೂ ತಾಂತ್ರಿಕ ಶಿಕ್ಷಣದ ವಸತಿ ನಿಲಯಗಳನ್ನು ಪ್ರಾರಂಭಿಸುವ ಕುರಿತು

ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

476 (591) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ನಗರದಲ್ಲಿ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ 100 ಸಂಖ್ಯಾಬಲದ ವಸತಿ ನಿಲಯದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ವಸತಿ ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?